ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1514
ಸದಸ್ಯರ ಹೆಸರು : ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು)
ಉತ್ತರಿಸುವ ದಿನಾಂಕ : 24-09-2021.
ಉತ್ತರಿಸುವವರು : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು.

ಕ್ರಸಂ	ಪ್ರಶ್ನೆ	ಉತ್ತರ
(ಅ)	ಗ್ರಾಮೀಣಾಭಿವೃದ್ಧಿಗೆಂದು ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಯಾವ ಯಾವ ಯೋಜನೆಗಳನ್ನು ರೂಪಿಸಿವೆ; ಈ ಯೋಜನೆಗಳಿಗೆ ಸರ್ಕಾರ ಮೀಸಲಿಟ್ಟಿರುವ ಅನುದಾನವೆಷ್ಟು; ಇದರಲ್ಲಿ ಎಷ್ಟು ಮೊತ್ತವನ್ನು ಖರ್ಚು ಮಾಡಲಾಗಿದೆ;	2020-21 ನೇ ಸಾಲಿನಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಿಂದ ಅನುಷ್ಠಾನಗೊಳಿಸಲಾದ ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಪ್ರಮುಖ ಯೋಜನೆಗಳಡಿ ಬಿಡುಗಡೆ ಮಾಡಿದ ಅನುದಾನ ಹಾಗೂ ವೆಚ್ಚದ ವಿವರವನ್ನು ಅನುಬಂಧದಲ್ಲಿ ನೀಡಿದೆ.
(ಆ)	ರಾಜ್ಯದಲ್ಲಿ ಇದುವರೆಗೂ ಎಷ್ಟು ಪಂಚಾಯತಿಗಳನ್ನು ಮೇಲ್ದರ್ಜೆಗೇರಿಸಲಾಗಿದೆ: ಉಳಿದ ಪಂಚಾಯತಿಗಳನ್ನು ಯಾವ ಕಾಲಮಿತಿಯಲ್ಲಿ ಮೇಲ್ದರ್ಜೆಗೇರಿಸಲಾಗುವುದು;	2011 ರ ಜನಗಣತಿಯನುಸಾರ, 73 ಗ್ರಾಮ ಪಂಚಾಯತಿಗಳನ್ನು ಪಟ್ಟಣ ಪಂಚಾಯತಿಗಳನ್ನಾಗಿ, 24 ಗ್ರಾಮ ಪಂಚಾಯತಿಗಳನ್ನು ಪುರಸಭೆಗಳನ್ನಾಗಿ ಹಾಗೂ 02 ಗ್ರಾಮ ಪಂಚಾಯತಿಗಳನ್ನು ನಗರಸಭೆಗಳನ್ನಾಗಿ ಪರಿವರ್ತಿಸಲಾಗಿದೆ. ಪ್ರಸ್ತುತ ಗ್ರಾಮ ಪಂಚಾಯತಿಯನ್ನು ಪರಿವರ್ತಿಸುವ ಯಾವುದೇ ಪ್ರಸ್ತಾವನೆ ಇರುವುದಿಲ್ಲ.
(ಇ)	ಪಂಚಾಯತ್ ಇಲಾಖೆಯಲ್ಲಿ ಖಾಲಿ ಇರುವ ಪಿ.ಡಿ.ಓ. ಮತ್ತು ಇ.ಓ.ಗಳ ಸಂಖ್ಯೆ ಎಷ್ಟು; ಇದರಿಂದ ಸಾರ್ವಜನಿಕರಿಗೆ ಆಡಳಿತಾತ್ಮಕವಾಗಿ ಆಗುವ ತೊಂದರೆಗಳನ್ನು ನಿವಾರಿಸಲು ಸರ್ಕಾರ ಯಾವ ಯಾವ ಕ್ರಮ ಕೈಗೊಂಡಿದೆ?	ಗ್ರಾಮ ಪಂಚಾಯತಿ ಪಂಚಾಯತಿ ಅಭಿವೃದ್ಧಿ ಅಧಿಕಾರಿ ವೃಂದದಲ್ಲಿ 728 ಹುದ್ದೆಗಳು ಮತ್ತು ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿ ವೃಂದದಲ್ಲಿ 73 ಹುದ್ದೆಗಳು ಖಾಲಿ ಇರುತ್ತವೆ. ಪಂಚಾಯತಿ ಅಭಿವೃದ್ಧಿ ಅಧಿಕಾರಿ ವೃಂದಕ್ಕೆ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ನೇಮಕಾತಿ ಪ್ರಾಧಿಕಾರ ಆಗಿದ್ದು ಗ್ರಾಮ ಪಂಚಾಯತಿ ಕಾರ್ಯದರ್ಶಿ ಗ್ರೇಡ್-1 ವೃಂದದ ಅರ್ಹ ನೌಕರರು ಲಭ್ಯವಾದಂತೆ ಜೇಷ್ಠತೆ ಮತ್ತು ಅರ್ಹತೆ ಆಧಾರದ ಮೇಲೆ ಮುಂಬಡ್ತಿ ಮೂಲಕ ಭರ್ತಿ ಮಾಡಲು ನಿರ್ದೇಶನ ನೀಡಲಾಗಿದೆ. ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿ ಖಾಲಿ ಹುದ್ದೆಗಳು ನೇರ ನೇಮಕಾತಿ ಕೋಟಾದಡಿಯಲ್ಲಿನ ಹುದ್ದೆಗಳಾಗಿದ್ದು, ಸದರಿ ಹುದ್ದೆಗಳಿಗೆ ಪ್ರಸ್ತುತ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಮತ್ತು ಇತರೆ ಅಭಿವೃದ್ಧಿ ಇಲಾಖೆಗಳ ಅಧಿಕಾರಿಗಳನ್ನು ನಿಯೋಜನೆ / ಪ್ರಭಾರದಲ್ಲಿರಿಸಲಾಗಿದೆ.

ಸಂ. ಗ್ರಾಅಪ 368 ಗ್ರಾಪಂಅ 2021

(ಕೆ.ಎಸ್. ಈಶ್ವರಪ್ಪ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು.

ವಿಧಾನ ಪರಿಷತ್ತಿನ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:1514

ಅನುಬಂಧ

2021-22ನೇ ಸಾಲಿನಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಿಂದ ಅನುಷ್ಠಾನಿಸಲಾದ ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಪ್ರಮುಖ ಯೋಜನೆಗಳಡಿ ಬಿಡುಗಡೆ ಮಾಡಿದ ಅನುದಾನ ಹಾಗೂ ವೆಚ್ಚದ ವಿವರ (ಆಗಸ್ಟ್ -2021 ರ ಅಂತ್ಯದವರೆಗೆ)

(ರೂ. ಲಕ್ಷಗಳಲ್ಲಿ)

ಕ್ರ. ಸಂ.	ಯೋಜನೆ	ಆಯವ್ಯಯ	ವೆಚ್ಚ
	I. ಕೇಂದ್ರ ವಲಯ / ಕೇಂದ್ರ ಪುರಸ್ಕೃತ		
1	ಕೇಂದ್ರ ಹಣಕಾಸು ಆಯೋಗದ ಅನುದಾನ (15ನೇ ಹಣಕಾಸು ಯೋಜನೆ)	237700.00	47540.00
2	ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ	663741.00	342687.76
3	ಗ್ರಾಮೀಣ ನೀರು ಸರಬರಾಜು (ಎನ್.ಆರ್.ಡಿ.ಡಬ್ಲ್ಯೂ.ಪಿ)	39056.09	98112.89
	II. ರಾಜ್ಯ ವಲಯ		
4	ಪಿ.ಎಂ.ಜಿ.ಎಸ್.ವೈ	150000.00	27136.04
5	ಪಿ.ಎಂ.ಜಿ.ಎಸ್.ವೈ ರಸ್ತೆಗಳ ನಿರ್ವಹಣೆ	8000.00	1968.65
6	ನಮ್ಮ ಗ್ರಾಮ ನಮ್ಮ ರಸ್ತೆ (ಎಸ್, ಡಿ.ಪಿ, ಎಸ್.ಸಿ.ಪಿ-ಟಿ.ಎಸ್.ಪಿ ಒಳಗೊಂಡಂತೆ)	92000.00	11249.16
7	ಜಿಲ್ಲಾ ಪಂಚಾಯತಿ ಅಭಿವೃದ್ಧಿ ಅನುದಾನ	17207.24	4301.75
8	2702 - ಸಣ್ಣ ನೀರಾವರಿ ಕೆರೆಗಳ ವಾರ್ಷಿಕ ನಿರ್ವಹಣೆ ಮತ್ತು ಪುನಶ್ಚೇತನ ಯೋಜನೆ	1603.77	9.00
9	3054 - ಯೋಜನೇತರ (ನಿರ್ವಹಣಾ ಅನುದಾನ) ಗ್ರಾಮೀಣ ರಸ್ತೆ ನಿರ್ವಹಣೆ ಯೋಜನೆ (ಕಾರ್ಯಪಡೆ)	21873.00	148.59
10	3054-80-196-1-03-300 (ಲಮ್ ಸಮ್) ಯೋಜನೆ	20000.00	3276.45